**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಜೇವರ್ಗಿ**

**ಸಿ.ಸಿ.ನಂಃ 140/2026**

ಪಿರ್ಯಾರ್ದುದಾರಃ ಕರ್ನಾಟಕ ಸರ್ಕಾರದ ಪರ ಜೇವರ್ಗಿ ಪೋಲಿಸ ಠಾಣೆ

**ವಿರುದ್ಧ**

ಆರೋಪಿತ 1. ಭೀರಪ್ಪ @ ಬಿರಣ್ಣ ತಂದೆ ನಿಂಗಣ್ಣ
ವಃ 35 ವರ್ಷ, ಉಃ ಗುತ್ತೇದಾರ,
ಸಾಃ ಕರಕಿನಹಳ್ಳಿ ಗ್ರಾಮ, ತಾಃ ಅಪಜಲ್ ಪೂರ
ಜಿಃ ಕಲಬುರಗಿ

**ಆಪಾದನೆ**

ಶ್ರೀಮತಿ ತಯ್ಯಬಾ ಸುಲ್ತಾನಾ, ಬಿ.ಎ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳಾದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆ,

ದಿನಾಂಕ 10-08-2025ರಂದು ಸಂಜೆ 05-30 ಗಂಟೆ ಸಮಯದಲ್ಲಿ ಜೇವರ್ಗಿ ಪೋಲಿಸ ಠಾಣಾ ವ್ಯಾಪ್ತಿಯ ಜೇವರ್ಗಿ-ಶಹಾಪೂರ ಮುಖ್ಯ ರಸ್ತೆಯ ಅವರಾದ ಕ್ರಾಸ್ ಹತ್ತಿರದ ರಸ್ತೆಯ ಮೇಲೆ ಆರೋಪಿಯಾದ ನೀವು ನಿಮ್ಮ ಕಾರ್ ನಂ.ಕೆಎ-36 ಝಡ್-8999ನೇದ್ದನ್ನು ಅತೀ ವೇಗ ಮತ್ತು ಅಜಾಗುರಕತೆಯಿಂದ ಮಾನವನ ಪ್ರಾಣಕ್ಕೆ ಹಾನಿಯುಂಟು ಮಾಡುವ ರೀತಿಯಲ್ಲಿ ಚಾಲನೆ ಮಾಡಿ ಚಾಸಾ-1 ಸುಮಿತ್ರಾರವರ ಮಗನಾದ ವಿವೇಕ ತಂದೆ ಯಲ್ಲಪ್ಪಾ ಪವಾರರವರು ಮುಖ್ಯ ರಸ್ತೆ ದಾಟುತ್ತಿರುವಾಗ ಆರೋಪಿಯಾದ ನೀವು ನಿಮ್ಮ ಕಾರಿನಿಂದ ಸದರಿ ವಿವೇಕನಿಗೆ ಡಿಕ್ಕಿಪಡಿಸಿ ಭಾರೀ ಗಾಯಗಳಾಗುವಂತೆ ಮಾಡಿದ ಕಾರಣ ಭಾರತೀಯ ನ್ಯಾಯ ಸಂಹಿತಾ ಕಲಂ 281, 125(ಬಿ) ರ ಅಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಎಸಗಿರುವಿರೆಂದು ನಿಮ್ಮ ಮೇಲೆ ಆರೋಪಿಸಲಾಗಿದೆ?

ಸದರಿ ಆಪಾದನೆಗಳ ಬಗ್ಗೆ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

ಸದರಿ ಮೇಲಿನ ಆರೋಪಣೆಗಳನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಈ ಮೇಲ್ಕಂಡ ಆರೋಪಗಳ ಬಗ್ಗೆ ವಿಚಾರಣೆಗೆ ಈ ಕೆಳಕಂಡಂತೆ ಆದೇಶಿಸುತ್ತೇನೆ.**

ಪ್ರಶ್ನೆ-1ಃ ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ?
ಆರೋಪಿಯ ಉತ್ತರಃ

ಪ್ರಶ್ನೆ-2ಃ ಸದರೀ ಆಪಾದನೆಗಳನ್ನು ಒಪ್ಪಿಕೊಳ್ಳುವೆಯೋ? ಅಥವಾ
ವಿಚಾರಣೆಯಾಗಬೇಕೋ?
ಆರೋಪಿಯ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸುತ್ತೇನೆ.

(ಶ್ರೀಮತಿ ತಯ್ಯಬಾ ಸುಲ್ತಾನಾ)
ದಿಃ 07-03-2026 ಹಿರಿಯ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,
ಜೇವರ್ಗಿ